ದೂರವಾಣಿ : 080-27835122

# ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-560 099.

www.anekal.tpa.gov.in, www.e-vinyasa.kar.nic.in

## ಪ್ರಾರಂಭಿಕ ಪ್ರಮಾಣ ಪತ್ರ

ಸಂಖ್ಯೆ:ಆಯೋಪ್ರಾ/ಸಿಸಿ/193/2026-27 ದಿನಾಂಕ: 09 JUL 2026

**M/s. Godrej Properties Limited rep. by Ms. Debleena Banerjee,** ಬೆಂಗಳೂರು ಇವರು ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಕಾಡಅಗ್ರಹಾರ ಗ್ರಾಮದ ಸ.ನಂ.27/1ರಲ್ಲಿನ 02ಎಕರೆ 13.08ಗುಂಟೆ, 27/3ರಲ್ಲಿನ 01ಎಕರೆ 14.08ಗುಂಟೆ, 27/5ರಲ್ಲಿನ 01ಎಕರೆ 14.08ಗುಂಟೆ, 27/8ರಲ್ಲಿನ 0-17.08ಗುಂಟೆ, 28/1ರಲ್ಲಿನ 01ಎಕರೆ 38ಗುಂಟೆ, 29/3ರಲ್ಲಿನ 0-25ಗುಂಟೆ ಒಟ್ಟು 08ಎಕರೆ 03ಗುಂಟೆ ವಿಸ್ತೀರ್ಣದ ಪ್ರದೇಶದಲ್ಲಿ ಅನುಮೋದನೆಯಾಗಿರುವ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯ ಇ-ಖಾತಾ ಸಂಖ್ಯೆ: **27/1 3 5 8 28/1 29/3,** ಸ್ವತ್ತಿನ ಸಂಖ್ಯೆ: **150200100100922059**ರ 15971.13ಚ.ಮೀ. ವಿಸ್ತೀರ್ಣದ ನಿವೇಶನದಲ್ಲಿ **Tower-A & B**ರಲ್ಲಿ **3 Common Basement +** ನೆಲ ಮತ್ತು ಮೇಲಿನ 35 ಅಂತಸ್ತುಗಳು **(ಟೆರೇಸ್ ವಿಸ್ತೀರ್ಣವನ್ನು ಒಳಗೊಂಡಂತೆ) 534 ವಸತಿ ಘಟಕಗಳ ಒಟ್ಟು 101868.34ಚ.ಮೀ. ವಿಸ್ತೀರ್ಣದಲ್ಲಿ ವಸತಿ ಸಮುಚ್ಚಯ** ಕಟ್ಟಡ ನಿರ್ಮಾಣಕ್ಕೆ **ಮತ್ತು Recreational Building** ರಲ್ಲಿ ನೆಲ ಮತ್ತು ಮೇಲಿನ 03 ಅಂತಸ್ತುಗಳು **(ಟೆರೇಸ್ ವಿಸ್ತೀರ್ಣವನ್ನು ಒಳಗೊಂಡಂತೆ) ಒಟ್ಟು 3101.41ಚ.ಮೀ. ವಿಸ್ತೀರ್ಣದಲ್ಲಿ Recreational** ಕಟ್ಟಡ ನಿರ್ಮಾಣಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ದಿನಾಂಕ:11.05.2026ರಂದು ಕೋರಿರುತ್ತಾರೆ. ಈ ಸಂಬಂಧ ಉತ್ತಮತೆ ಶುಲ್ಕ ರೂ.23,48,000/- ಪರಿಶೀಲನಾ ಮತ್ತು ನಕ್ಷೆ ಪ್ರತಿಗಳ ಶುಲ್ಕ ರೂ.24,000/-, ಭದ್ರತಾ ಠೇವಣಿ ಶುಲ್ಕ ರೂ.52,49,000/-ಗಳ ಚಲನ್ ಸಂಖ್ಯೆ:569, ದಿನಾಂಕ:24.06.2026ರಂದು ಪಾವತಿಸಲಾಗಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್ 15(1)ರನ್ವಯ ಈ ಕೆಳಕಂಡ ಷರತ್ತುಗೊಳಪಡಿಸಿ, ಪ್ರಾರಂಭಿಕ ಪ್ರಮಾಣ ಪತ್ರ ನೀಡಿದೆ.

### ಷರತ್ತುಗಳು

1) ಕಟ್ಟಡ ನಿರ್ಮಾಣ ಕಾರ್ಯ ಪ್ರಾರಂಭಿಸುವ ಮುನ್ನ **ಯಮರೆ ಗ್ರಾಮ ಪಂಚಾಯಿತಿಯಿಂದ** ಕಟ್ಟಡ ಪರವಾನಿಗೆಯನ್ನು ಪಡೆಯತಕ್ಕದ್ದು.
2) ಮೇಲ್ಕಂಡ ಪ್ರದೇಶದಲ್ಲಿ ನಿರ್ಮಿಸುವ ಕಟ್ಟಡವನ್ನು ಈ ಕಛೇರಿಯಿಂದ ಅನುಮತಿ ನೀಡಿರುವಂತೆ **ವಸತಿ ಸಮುಚ್ಚಯ ಕಟ್ಟಡ** ಉಪಯೋಗಕ್ಕೆ ಮಾತ್ರ ಉಪಯೋಗಿಸತಕ್ಕದ್ದು, ಮತ್ತು ಕಟ್ಟಡವನ್ನು ಅನುಮೋದಿತ ನಕ್ಷೆಯಂತೆ ಕಟ್ಟಡ ನಿರ್ಮಿಸತಕ್ಕದ್ದು.
3) ಕಟ್ಟಡ ನಿರ್ಮಾಣದ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್ 15(1)ರಡಿ ನೀಡಲಾಗಿರುವ ಪ್ರಾರಂಭಿಕ ಪ್ರಮಾಣ ಪತ್ರವಾಗಿರುತ್ತದೆ.
4) ನಿರ್ಮಾಣ ಕಾರ್ಯಕ್ಕೆ ಬಾಲ ಕಾರ್ಮಿಕರನ್ನು ನಿಯೋಜಿಸಿಕೊಳ್ಳತಕ್ಕದ್ದಲ್ಲ ಹಾಗೂ ಕಾರ್ಮಿಕರ ಕಲ್ಯಾಣ ನಿಧಿಗೆ ಪಾವತಿಸಬೇಕಾದ ಶುಲ್ಕವನ್ನು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಯಿಂದ ಪರವಾನಿಗೆ ಪಡೆಯುವ ಸಮಯದಲ್ಲಿ ಕಡ್ಡಾಯವಾಗಿ ಪಾವತಿಸತಕ್ಕದ್ದು.
5) ಕಟ್ಟಡ ನಿರ್ಮಾಣಕ್ಕೆ ಜಾರಿಯಲ್ಲಿರುವ ವಲಯ ನಿಯಮಾವಳಿಗಳು ಮತ್ತು ಕಟ್ಟಡದ, ವಿಧಿಗಳ ನಿಬಂಧನೆಗಳಿಗೆ ಅನುಗುಣವಾಗಿರತಕ್ಕದ್ದು.
6) ಈ ಪ್ರಾರಂಭಿಕ ಪ್ರಮಾಣ ಪತ್ರವು **ಮಂಜೂರಾದ ದಿನಾಂಕದಿಂದ ಎರಡು ವರ್ಷದವರೆಗೆ ಮಾತ್ರ ಮಾನ್ಯತೆ ಹೊಂದಿರುತ್ತದೆ.** ಈ ಅವಧಿಯಲ್ಲಿ ಕಟ್ಟಡ ಕಾಮಗಾರಿ ಪ್ರಾರಂಭಿಸದೇ ಇದ್ದಲ್ಲಿ ಹೊಸದಾಗಿ ಪ್ರಾರಂಭಿಕ ಪ್ರಮಾಣ ಪತ್ರ ಪಡೆಯತಕ್ಕದ್ದು.

...2.

7) ಅನುಮೋದಿತ ನಕ್ಷೆಯನ್ನು ಉಲ್ಲಂಘಿಸಿ ಕಟ್ಟಡ ಕಾರ್ಯವನ್ನು ಕೈಗೊಳ್ಳಬಾರದು ಮತ್ತು ಏನಾದರೂ ಬದಲಾವಣೆಗಳು ಅವಶ್ಯವಿದ್ದಲ್ಲಿ ಮಾರ್ಪಾಡಿತ ನಕ್ಷೆಗೆ ಮಂಜೂರಾತಿ ಪಡೆದು ಮುಂದುವರೆಸತಕ್ಕದ್ದು.

8) ಒಂದು ಅನುಮೋದಿತ ಕಟ್ಟಡ ನಕ್ಷೆಯನ್ನು ಕಟ್ಟಡ ನಿರ್ಮಾಣ ಸ್ಥಳದಲ್ಲಿ ಅಧಿಕಾರಿಗಳ ಸಮೀಕ್ಷೆಗಾಗಿ ಪ್ರದರ್ಶಿಸತಕ್ಕದ್ದು.

9) ವಿನ್ಯಾಸದಾರರು ಕಟ್ಟಡ ನಿರ್ಮಾಣದ ಸುತ್ತ ತಡೆಗೋಡೆ ನಿರ್ಮಿಸಿ ಧೂಳು, ಕಟ್ಟಡ ಸಾಮಾಗ್ರಿಗಳಿಂದ ಅಕ್ಕಪಕ್ಕದ ಜನರಿಗೆ ಮತ್ತು ಕಟ್ಟಡಗಳಿಗೆ ತೊಂದರೆಯಾಗದಂತೆ ನಿರ್ವಹಿಸತಕ್ಕದ್ದು.

10) ತಾತ್ಕಾಲಿಕ ಶೌಚಾಲಯಗಳನ್ನು ಕಾರ್ಮಿಕರ ಅನುಕೂಲಕ್ಕಾಗಿ ನಿರ್ಮಿಸಿ ನಂತರ ನಿರ್ಮೂಲಗೊಳಿಸತಕ್ಕದ್ದು.

11) ವಾಹನ ಚಾಲಕರು, ಕಾವಲುಗಾರರು ಮತ್ತು ಸಂದರ್ಶಕರಿಗಾಗಿ ಒಂದು ಶೌಚಾಲಯವನ್ನು ನಿರ್ಮಿಸತಕ್ಕದ್ದು.

12) ಒಣಕಸ/ಹಸಿಕಸವನ್ನು ಪ್ರತ್ಯೇಕವಾಗಿ ಬೇರ್ಪಡಿಸಿ ಗೊಬ್ಬರವಾಗಿ ಮಾರ್ಪಡಿಸಲು ಸೂಕ್ತ ಕ್ರಮ ಕೈಗೊಳ್ಳತಕ್ಕದ್ದು.

13) ವಾಹನ ನಿಲುಗಡೆ ಪ್ರದೇಶವನ್ನು ಅದೇ ಉದ್ದೇಶಕ್ಕೆ ಉಪಯೋಗಿಸತಕ್ಕದ್ದು.

14) ಪ್ರಸ್ತಾವಿತ ಪ್ರದೇಶದ ಸುತ್ತಲೂ ಬರುವ ನಡುಜಾಗಗಳಲ್ಲಿ ಕಡ್ಡಾಯವಾಗಿ ಮರಗಳನ್ನು ಬೆಳೆಸತಕ್ಕದ್ದು.

15) ಕಟ್ಟಡ ನಿರ್ಮಾಣ ಸಾಮಾಗ್ರಿಗಳನ್ನು ರಸ್ತೆಯಲ್ಲಿ/ಚರಂಡಿ ಮೇಲೆ ಅಥವಾ ಯಾವುದೇ ಸಾರ್ವಜನಿಕ ಪ್ರದೇಶದಲ್ಲಿ ಶೇಖರಣೆ ಮಾಡಬಾರದು, ಈ ಬಗ್ಗೆ ಕಂಡುಬಂದಲ್ಲಿ ಪ್ರಾರಂಭಿಕ ಪ್ರಮಾಣ ಪತ್ರವನ್ನು ರದ್ದುಪಡಿಸಲಾಗುವುದು.

16) ನಿವೇಶನದ ಆವರಣದೊಳಗೆ ಮಳೆ ನೀರಿನ ಕೊಯ್ಲುನ್ನು ಅಳವಡಿಸಿ ಸೂಕ್ತವಾಗಿ ನಿರ್ವಹಿಸತಕ್ಕದ್ದು.

17) ಸೋಲಾರ್ ವಾಟರ್ ಹೀಟರ್/ಸೋಲಾರ್ ಲೈಟ್‌ಗಳನ್ನು ಕಟ್ಟಡದಲ್ಲಿ ಕಡ್ಡಾಯವಾಗಿ ಅಳವಡಿಸತಕ್ಕದ್ದು.

18) ಪ್ರಸ್ತಾವಿತ ನಿವೇಶನವು ಯಾವುದೇ ಭೂಸ್ವಾಧೀನಕ್ಕೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.

19) ಪ್ರಸ್ತಾವಿತ ಪ್ರದೇಶದಲ್ಲಿ ವಿಕಲಚೇತನರಿಗೆ ಅನುಕೂಲವಾಗುವಂತೆ ಕಟ್ಟಡದ ಸುತ್ತಲೂ ಪಾದಚಾರಿ ಮಾರ್ಗದಲ್ಲಿ ಮತ್ತು Lift ಹಾಗೂ Ramp ನಲ್ಲಿ ಎರಡು ಚಕ್ರಗಳ ಖುರ್ಚಿ ಸರಾಗವಾಗಿ ಹೋಗಿ ಬರುವಂತೆ ಕಡ್ಡಾಯವಾಗಿ ನಿರ್ಮಿಸತಕ್ಕದ್ದು.

20) ಈ ನಿವೇಶನದ ಬಗ್ಗೆ ಏನಾದರೂ ಸಿವಿಲ್ ವ್ಯಾಜ್ಯಗಳು ಉದ್ಭವಿಸಿದಲ್ಲಿ ನ್ಯಾಯಾಲಯದ ತೀರ್ಮಾನಕ್ಕೆ ನೀವು ಬದ್ಧರಾಗಿರತಕ್ಕದ್ದು.

21) ಯಾವುದೇ ಸಿವಿಲ್ ವ್ಯಾಜ್ಯಗಳಿದ್ದಲ್ಲಿ, ನ್ಯಾಯಾಲಯದ ಆದೇಶಕ್ಕೆ ಬದ್ಧರಾಗಿರುವ, ಸುಳ್ಳು ಮಾಹಿತಿ ಅಥವಾ ಸಲ್ಲಿಸಿರುವ ಯಾವುದೇ ಮಾಹಿತಿ / ದಾಖಲೆಗಳು, ತಪ್ಪಾಗಿದ್ದಲ್ಲಿ / ಪೋರ್ಜರಿ ಆಗಿದ್ದಲ್ಲಿ / ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ ಕಟ್ಟಡ ನಕ್ಷೆ ಅನುಮೋದನೆಯು ಸ್ವಯಂಚಾಲಿತವಾಗಿ ರದ್ದಾಗುವ ನಿಬಂಧನೆಗೊಳ್ಳಪಟ್ಟಿರುತ್ತದೆ.

22) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪತ್ರ ಸಂಖ್ಯೆ: Consent Order No. CTE-353220 PCB ID 292153, ದಿನಾಂಕ:17.03.2026ರಲ್ಲಿ ವಿಧಿಸಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗತಕ್ಕದ್ದು ಮತ್ತು ನಿಬಂಧನೆಗಳನ್ನು ತಪ್ಪದೇ ಪಾಲಿಸತಕ್ಕದ್ದು.

...3.

ದೂರವಾಣಿ : 080-27835122

# ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆಸ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-560 099.

www.anekal.tpa.gov.in, www.e-vinyasa.kar.nic.in



23) ಕಟ್ಟಡ ಕಾಮಗಾರಿಗಳನ್ನು ಪ್ರಾರಂಭಿಸುವ ಮುನ್ನ

a. State Level Environmental Impact Assessment Authority-Karnataka ರವರ ಪತ್ರ ಸಂಖ್ಯೆ: SEIAA 104 CON 2026 ದಿನಾಂಕ:07.05.2026ರಲ್ಲಿ ವಿಧಿಸಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗತಕ್ಕದ್ದು ಮತ್ತು ನಿಬಂಧನೆಗಳನ್ನು ತಪ್ಪದೇ ಪಾಲಿಸತಕ್ಕದ್ದು.

b. Bangalore Electricity Supply Company Limited ರವರ ಪತ್ರ ಸಂಖ್ಯೆ: CEBRAZ/SEO/AEE-1/26-27/3009-12 ದಿನಾಂಕ:07.07.2026ರಲ್ಲಿ ವಿಧಿಸಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗತಕ್ಕದ್ದು ಮತ್ತು ನಿಬಂಧನೆಗಳನ್ನು ತಪ್ಪದೇ ಪಾಲಿಸತಕ್ಕದ್ದು.

c. Airports Authority of India ರವರ NOC ID: HOSU/SOUTH/B/020226/2416962, ದಿನಾಂಕ:30.03.2026ರಲ್ಲಿ ವಿಧಿಸಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗತಕ್ಕದ್ದು ಮತ್ತು ನಿಬಂಧನೆಗಳನ್ನು ತಪ್ಪದೇ ಪಾಲಿಸತಕ್ಕದ್ದು.

d. Karnataka State Fire & Emergency Services ರವರ ಪತ್ರ ಸಂಖ್ಯೆ: KSFES/GBC(1)/077 Docket No. KSFEES/NOC/077/2026, ದಿನಾಂಕ:17.04.2026ರಲ್ಲಿ ವಿಧಿಸಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗತಕ್ಕದ್ದು ಮತ್ತು ನಿಬಂಧನೆಗಳನ್ನು ತಪ್ಪದೇ ಪಾಲಿಸತಕ್ಕದ್ದು.

e. ದೂರ ಸಂಪರ್ಕ ಇಲಾಖೆ ಪತ್ರ ಸಂಖ್ಯೆ: DGM(CM)BGTD/NOC for high rise/2025-26/198 ದಿನಾಂಕ:07.03.2026ರಲ್ಲಿ ವಿಧಿಸಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗತಕ್ಕದ್ದು ಮತ್ತು ನಿಬಂಧನೆಗಳನ್ನು ತಪ್ಪದೇ ಪಾಲಿಸತಕ್ಕದ್ದು.

24) **ಕಟ್ಟಡ ಕಾಮಗಾರಿಗಳನ್ನು ಪ್ರಾರಂಭಿಸುವ ಮುನ್ನ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಿಂದ ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳತಕ್ಕದ್ದು.**

25) ಕಟ್ಟಡ ನಿರ್ಮಾಣ ಹಂತದಲ್ಲಿ ಕಟ್ಟಡ ಕಾರ್ಮಿಕರ Safety measuresನ್ನು ಕಡ್ಡಾಯವಾಗಿ ಅಳವಡಿಸತಕ್ಕದ್ದು.

26) ಕಟ್ಟಡ ನಕ್ಷೆ ಮಂಜೂರಾತಿ, ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆದ ನಂತರ ವಸತಿ ಸಮುಚ್ಚಯಗಳಲ್ಲಿ / ಕಟ್ಟಡದಲ್ಲಿ ಸುರಕ್ಷತಾ ದೃಷ್ಟಿಯಿಂದ ಬಾಲ್ಕನಿಯಲ್ಲಿ ಬದಲಾವಣೆಗಳು ಹಾಗೂ ಇನ್ನಿತರೆ ಅಸುರಕ್ಷತಾ ಮಾರ್ಪಾಡುಗಳನ್ನು ಮಾಡತಕ್ಕದ್ದಲ್ಲ.

27) ಕಟ್ಟಡ ಪ್ರಾರಂಭಿಸುವ ಮುನ್ನ Structural Design ಬಗ್ಗೆ ನೊಂದಾಯಿತ Structural constultants ರವರಿಂದ National Building code-2016 ಅನುಗುಣವಾಗಿ Design ಪಡೆದು ಕಟ್ಟಡ ಕಾಮಗಾರಿ ಪ್ರಾರಂಭಿಸುವುದು.

...4.

28) ಕಟ್ಟಡ ಪ್ರಾರಂಭಿಸುವ ಮುನ್ನ Earthquake Resistant ಬಗ್ಗೆ ನೊಂದಾಯಿತ Structural constultants ರವರಿಂದ National Building code-2016 ಅನುಗುಣವಾಗಿ Design ಪಡೆದು ಕಟ್ಟಡ ಕಾಮಗಾರಿ ಪ್ರಾರಂಭಿಸುವುದು.

29) ನೈಸರ್ಗಿಕವಾಗಿ ಹರಿಯುವ ನದಿ/ಹಳ್ಳ/ಕೆರೆ/ನಾಲಾ ಮುಂತಾದವುಗಳಿಗೆ ವಿನ್ಯಾಸದ ಮಲಿನ ನೀರನ್ನು ಬಿಡಬಾರದು. ಸದರಿ ವಿನ್ಯಾಸ ನಕ್ಷೆಯಲ್ಲಿ ಸೂಚಿಸಲಾಗಿರುವ ನಾಲಾ ಪ್ರದೇಶಗಳಲ್ಲಿ ರಸ್ತೆ ಪರಿಚಲನೆಯನ್ನು ಮುಂದುವರಿಸುವಾಗ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿ ಪಡೆದು ಕಲ್ವರ್ಟ್ ಕಟ್ಟತಕ್ಕದ್ದು ಹಾಗೂ ನೀರಿನ ಹರಿವೆಗಾಗಿ ಯಾವುದೇ ಅಡಚಣೆ ಮಾಡತಕ್ಕದ್ದಲ್ಲ ಹಾಗೂ ಸೂಕ್ತ ಡ್ರೈನೇಜ್ ನಿರ್ಮಿಸಿ ಸಂರಕ್ಷಿಸತಕ್ಕದ್ದು ಹಾಗೂ ಯಾವುದೇ ಒತ್ತುವರಿ ಮಾಡತಕ್ಕದ್ದಲ್ಲ.

30) ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಈ ಕೆಳಗಿನ ಮತ್ತು ಇತರೆ ಯಾವುದೇ ಪ್ರಾಧಿಕಾರವು ವಿಧಿಸುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯು ಯಾವ ಪೂರ್ವ ಸೂಚನೆಯೂ ಇಲ್ಲದೇ ತಂತಾನೆ ರದ್ದಾಗುತ್ತದೆ.

31) ಅನುಮೋದಿತ ನಕ್ಷೆಯ ವಿವರಗಳು ಈ ಕೆಳಕಂಡಂತಿದೆ;

| ವಿವರ | ವಲಯ ನಿಯಮಾವಳಿಯಂತೆ | ನಕ್ಷೆಯಂತೆ |
|---|---|---|
| ನಡುಜಾಗಗಳು | ಸುತ್ತಲೂ 16.00ಮೀ. | ಸುತ್ತಲೂ 16.00ಮೀ. |
| ನೆಲ ವಿಸ್ತೀರ್ಣ ಪ್ರಮಾಣ (FAR) | 2.25 | 2.24 |
| ರಸ್ತೆಯ ಅಗಲ | 12.00ಮೀ. | 12.20ಮೀ. |
| ಕಟ್ಟಡದ ಅಂತಸ್ತುಗಳು | - | **Tower-A:** 3 Basement + Ground + Upper 35 Floors (267 Units) (ಟೆರೆಸ್ ವಿಸ್ತೀರ್ಣವನ್ನು ಒಳಗೊಂಡಂತೆ)<br>**Tower-B:** 3 Basement + Ground + Upper 35 Floors (267 Units) (ಟೆರೆಸ್ ವಿಸ್ತೀರ್ಣವನ್ನು ಒಳಗೊಂಡಂತೆ)<br>**Recreational Building:** 3 Basement + Ground + Upper 03 Floors (ಟೆರೆಸ್ ವಿಸ್ತೀರ್ಣವನ್ನು ಒಳಗೊಂಡಂತೆ) |
| ವಾಹನ ನಿಲುಗಡೆ | 634No's | 634No's |
| ದ್ವಿಚಕ್ರ ವಾಹನ ನಿಲುಗಡೆ | ಶೇ.25ರಷ್ಟು ವಾಹನ ನಿಲುಗಡೆ (2179.37ಚ.ಮೀ) | 2180.00ಚ.ಮೀ. |
| ಕಟ್ಟಡದ ಎತ್ತರ | -- | 109.15ಮೀ. |

...5.

B

ದೂರವಾಣಿ : 080-27835122

# ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-560 099.

www.anekal.tpa.gov.in, www.e-vinyasa.kar.nic.in



ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರಂತೆ ಕ್ರಮ ಕೈಗೊಳ್ಳಲು ಪ್ರಾಧಿಕಾರಕ್ಕೆ ಅವಕಾಶ ಇರುವುದನ್ನು ನಿಮ್ಮ ಗಮನಕ್ಕೆ ತರಲಾಗಿದೆ.

9/07/...

ಸದಸ್ಯ- ಕಾರ್ಯದರ್ಶಿ ಹಾಗೂ ನಗರ ಮತ್ತು
ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು,
ಆನೇಕಲ್ ಯೋಜನಾ ಪ್ರಾಧಿಕಾರ,
ಆನೇಕಲ್.

**ಇವರಿಗೆ,**

**M/s. Godrej Properties Limited**
**rep. by Ms. Debleena Banerjee,**
Unit No. 4 & 5, 9th Floor, No.1-15,
Godrej Centre, Indiranagar, BM Kaval,
Old Madras Road, Bengaluru-560 038.

B